56

## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀಮತಿ ಸಂಪತ್ತಾಬಾಯಿ ವಿಠೋಬಾ ಹಕ್ಕೆ, ಅಧ್ಯಕ್ಷರು, ಅಲಿಯಾಬಾದ ಗ್ರಾಮ ಪಂಚಾಯತಿ, ವಿಜಯಪುರ ತಾಲ್ಲೂಕು ಮತ್ತು ಜಿಲ್ಲೆ ಇವರ ವಿರುದ್ದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ರಡಿ ಕ್ರಮ ಜರುಗಿಸುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 1135 ಗ್ರಾಪಂಅ 2018 ದಿನಾಂಕ:02.02.2019.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ವಿಜಯಪುರ ಇವರ ಪತ್ರ ಸಂಖ್ಯೆ:ಜಿಪಂಅ/ಗ್ರಾಪಂ/ಸಿಬ್ಬಂದಿ/ಸಿಆರ್-77/2019-20/1519-20/1519, ದಿ:16-08-2019.
3. ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ, ಬೆಳಗಾವಿ ಇವರ ಪತ್ರ ಹಾಗೂ ವಿಚಾರಣಾ ವರದಿ ಸಂಖ್ಯೆ:ಪ್ರಾಆಬೆ:ಜಿಪಂ:43(ಎ):ಸಿಆರ್-19:2019-20, ದಿ:18.01.2020.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಾಂಕ (1)ರ ಸರ್ಕಾರಿ ಆದೇಶದಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರಡಿ ಗ್ರಾಮ ಪಂಚಾಯಿತಿ ಸದಸ್ಯರುಗಳು, ಪ್ರಕರಣ 48(4) ಮತ್ತು 48(5) ರಡಿ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರುಗಳ ಮೇಲೆ ದುರ್ವರ್ತನೆ, ಅಧಿಕಾರ ಮತ್ತು ಹಣ ದುರುಪಯೋಗಕ್ಕಾಗಿ ಕ್ರಮಕೈಗೊಳ್ಳುವ ಸಲುವಾಗಿ ವಿಚಾರಣೆ ನಡೆಸುವ ಅಧಿಕಾರವನ್ನು ಪ್ರಾದೇಶಿಕ ಆಯುಕ್ತರುಗಳಿಗೆ ವಹಿಸಲಾಗಿದೆ.

ಅದರಂತೆ, ಮೇಲೆ ಓದಲಾದ ಕ್ರಮಾಂಕ (2)ರ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯತ್, ವಿಜಯಪುರ ಇವರು ತಮ್ಮ ಪತ್ರದಲ್ಲಿ ಶ್ರೀಮತಿ ಸಂಪತ್ತಾಬಾಯಿ ವಿಠೋಬಾ ಹಕ್ಕೆ, ಅಧ್ಯಕ್ಷರು, ಅಲಿಯಾಬಾದ ಗ್ರಾಮ ಪಂಚಾಯತಿ, ವಿಜಯಪುರ ತಾಲ್ಲೂಕು ಮತ್ತು ಜಿಲ್ಲೆ ಇವರ ವಿರುದ್ದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ರಡಿ ಕೆಳಕಂಡ ಆರೋಪದ ಮೇಲೆ ತನಿಖೆಯನ್ನು ನಡೆಸಲು ಕೋರಿರುತ್ತಾರೆ.

- ಶ್ರೀಮತಿ ಸಂಪತ್ತಾಬಾಯಿ ವಿಠೋಬಾ ಹಕ್ಕೆ, ಅಧ್ಯಕ್ಷರು, ಅಲಿಯಾಬಾದ ಗ್ರಾಮ ಪಂಚಾಯತಿ, ವಿಜಯಪುರ ತಾಲ್ಲೂಕು ಮತ್ತು ಜಿಲ್ಲೆ ಇವರು ದಿನಾಂಕ:12-12-2017 ರಂದು ಗ್ರಾಮ ಸಭೆ ಜರುಗಿದ್ದರೂ ಕೂಡಾ ಅದರ ವಿಡಿಯೋ ಚಿತ್ರೀಕರಣವನ್ನು ಮಾಡಿಸದೇ ಅದರ ಚಿತ್ರೀಕರಣವನ್ನು ಒಂದು ವರ್ಷದ ನಂತರ ಅಂದರೆ ದಿನಾಂಕ:10-12-2018ರ ನಂತರ ಕ್ರಿಯೇಟ್ ಮಾಡಿ ಈಗಾಗಲೇ 20 ಜನ ಫಲಾನುಭವಿಗಳನ್ನು ಆಯ್ಕೆ ಮಾಡಿರುವುದಲ್ಲದೇ ಒಟ್ಟು 268 ಫಲಾನುಭವಿಗಳಲ್ಲಿ 51 ಫಲಾನುಭವಿಗಳ ಹೆಸರನ್ನು ಸಭೆಯಲ್ಲಿ ಓದದೇ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಜೊತೆಗೆ ಶಾಮೀಲಾಗಿ ಅಧಿಕಾರ ದುರುಪಯೋಗಪಡಿಸಿಕೊಂಡಿರುವ ಆರೋಪದ ಬಗ್ಗೆ.

ಮೇಲೆ ಓದಲಾದ ಕ್ರಮಾಂಕ (3)ರ ಪ್ರಸ್ತಾವನೆಯಲ್ಲಿ ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ ಬೆಳಗಾವಿ, ಇವರು ತಮ್ಮ ವರದಿಯಲ್ಲಿ ಶ್ರೀಮತಿ ಸಂಪತ್ತಾಬಾಯಿ ವಿಠೋಬಾ ಹಕ್ಕೆ, ಅಧ್ಯಕ್ಷರು, ಅಲಿಯಾಬಾದ ಗ್ರಾಮ ಪಂಚಾಯತಿ, ವಿಜಯಪುರ ತಾಲ್ಲೂಕು ಮತ್ತು ಜಿಲ್ಲೆ ಇವರ ಇವರ ವಿರುದ್ದದ ಆರೋಪಗಳಿಗೆ ಸಂಬಂಧಿಸಿದಂತೆ ವಿಚಾರಣೆಯನ್ನು ಜರುಗಿಸಲಾಗಿರುತ್ತದೆ. ವಿಚಾರಣೆ ಸಮಯದಲ್ಲಿ ವಾದಿ ಮತ್ತು ಪ್ರತಿವಾದಿಗಳ ವಾದ ವಿವಾದಗಳನ್ನು ಆಲಿಸಿ ಅವರುಗಳು ಸಲ್ಲಿಸಿದ ಲಿಖಿತ ಹೇಳಿಕೆಯನ್ನು ಹಾಗೂ ಪ್ರಕರಣಕ್ಕೆ ಸಂಬಂಧಪಟ್ಟ ದಾಖಲೆಗಳನ್ನು ಪರಿಶೀಲಿಸಿದ್ದು, ಪ್ರಕರಣದಲ್ಲಿ ಸದರಿ ಅಧ್ಯಕ್ಷರು ಗ್ರಾಮ ಸಭೆಯ ನಕಲಿ ವಿಡಿಯೋ ಸೃಷ್ಠಿಯಲ್ಲಿ ಭಾಗಿಯಾಗಿ, ದುರ್ನಡತೆ ತೋರಿರುವುದು ದಾಖಲೆಗಳಿಂದ ಸಾಬೀತಾಗಿರುವುದರಿಂದ ಸದರಿಯವರ ಸದಸ್ಯತ್ವವನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ಮತ್ತು 48(4) ರಡಿಯಲ್ಲಿ ರದ್ದುಗೊಳಿಸಲು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಈ ಪ್ರಕರಣದ ವಿಚಾರಣಾ ವರದಿ ಮತ್ತು ದಾಖಲೆಗಳನ್ನು ಪರಿಶೀಲಿಸಲಾಗಿ ಶ್ರೀಮತಿ ಸಂಪತ್ತಾಬಾಯಿ ವಿಠೋಬಾ ಹಕ್ಕೆ, ಅಧ್ಯಕ್ಷರು, ಅಲಿಯಾಬಾದ ಗ್ರಾಮ ಪಂಚಾಯತಿ, ವಿಜಯಪುರ ತಾಲ್ಲೂಕು ಮತ್ತು ಜಿಲ್ಲೆ ಇವರ ವಿರುದ್ಧ ಮಾಡಲಾದ ಆರೋಪಗಳು ಸಾಬೀತಾಗಿರುವ ಹಿನ್ನೆಲೆಯಲ್ಲಿ ಶ್ರೀಮತಿ ಸಂಪತ್ತಾಬಾಯಿ ವಿಠೋಬಾ ಹಕ್ಕೆ, ಅಧ್ಯಕ್ಷರು, ಅಲಿಯಾಬಾದ ಗ್ರಾಮ ಪಂಚಾಯತಿ, ವಿಜಯಪುರ ತಾಲ್ಲೂಕು ಮತ್ತು ಜಿಲ್ಲೆ ಇವರನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 48(4) ಹಾಗೂ 48(5) ರಡಿಯಲ್ಲಿ ಅಧ್ಯಕ್ಷ ಸ್ಥಾನ ಹಾಗೂ ಸದಸ್ಯತ್ವದಿಂದ ತೆಗೆದುಹಾಕಲು ಸರ್ಕಾರವು ನಿರ್ಣಯಿಸಿದೆ.

ಅದರಂತೆ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 174 ಗ್ರಾಪಂಅ 2020 ಬೆಂಗಳೂರು, ದಿನಾಂಕ:07.03.2020</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಶ್ರೀಮತಿ ಸಂಪತ್ತಾಬಾಯಿ ವಿಠೋಬಾ ಹಕ್ಕೆ, ಅಧ್ಯಕ್ಷರು, ಅಲಿಯಾಬಾದ ಗ್ರಾಮ ಪಂಚಾಯತಿ, ವಿಜಯಪುರ ತಾಲ್ಲೂಕು ಮತ್ತು ಜಿಲ್ಲೆ ಇವರನ್ನು ಇವರನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 48(4) ಹಾಗೂ 48(5) ರಡಿಯಲ್ಲಿ ಅಧ್ಯಕ್ಷ ಸ್ಥಾನ ಹಾಗೂ ಸದಸ್ಯತ್ವವನ್ನು ತಕ್ಷಣದಿಂದ ಜಾರಿಗೆ ಬರುವಂತೆ ತೆಗೆದುಹಾಕಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

B. Naveenkumar 07/03/2020
(ಬಿ. ನವೀನ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,(ಗ್ರಾ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

07/03/2020

**<u>ಪ್ರತಿ:</u>**

1) ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ, ಬೆಳಗಾವಿ.
2) ಜಿಲ್ಲಾಧಿಕಾರಿಗಳು, ವಿಜಯಪುರ ಜಿಲ್ಲೆ.

3) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ವಿಜಯಪುರ ಜಿಲ್ಲೆ.
4) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ವಿಜಯಪುರ ತಾಲ್ಲೂಕು ಮತ್ತು ಜಿಲ್ಲೆ.
5) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಅಲಿಯಾಬಾದ ಗ್ರಾಮ ಪಂಚಾಯತಿ, ವಿಜಯಪುರ ತಾಲ್ಲೂಕು ಮತ್ತು ಜಿಲ್ಲೆ.
6) ಶ್ರೀಮತಿ ಸಂಪತ್ತಾಬಾಯಿ ವಿಠೋಬಾ ಹಕ್ಕೆ, ಅಂದಿನ ಅಧ್ಯಕ್ಷರು, ಅಲಿಯಾಬಾದ ಗ್ರಾಮ ಪಂಚಾಯತಿ, ವಿಜಯಪುರ ತಾಲ್ಲೂಕು ಮತ್ತು ಜಿಲ್ಲೆ (**ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ವಿಜಯಪುರ ತಾಲ್ಲೂಕು ಮತ್ತು ಜಿಲ್ಲೆ ಇವರ ಮುಖಾಂತರ**)

**ಪ್ರತಿಯನ್ನು ಮಾಹಿತಿಗಾಗಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
3) ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.
4) ಗಣಕ ಕೋಶ.